ಕರ್ನಾಟಕಸರ್ಕಾರ

(ಕಂದಾಯಇಲಾಖೆ)

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು

ದೂರವಾಣಿ ಸಂಖ್ಯೆ:0821-2424079,2422110,2428383

ಫ್ಯಾಕ್ಸ್ ನಂ : 2429012 & 2428383 E-Mail : dcofficemysuru@gmail.com

ಸಂಖ್ಯೆ :MYSDC- MAG1 /MLO/71/2020 ದಿನಾಂಕ: 21 /03/2020

ರಾಷ್ಟ್ರೀಯ ವಿಜ್ಞಾನ ಸೂಚಕ ಅಧಿಕಾರಿಗಳು
NIC, ಮೈಸೂರು

COVID-19

ಮಾನ್ಯರೇ

ವಿಷಯ: ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ಹಾಗೂ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಸ್ವಯಂ ಸೇವಕರ (Volunteers) ನೋಂದಣಿಗೆ ತಂತ್ರಾಂಶ ಅಭಿವೃದ್ಧಿಪಡಿಸಿ ಜಿಲ್ಲಾ ವೆಬ್ ಸೈಟ್ ನಲ್ಲಿ ಅಳವಡಿಸುವ ಕುರಿತು.

ಉಲ್ಲೇಖ:

1. ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್ -2020ರ ಅಧಿಸೂಚನೆ ಸಂಖ್ಯೆ: ಹೆಚ್.ಎಫ್,ಡಬ್ಲ್ಯೂ,54 ಸಿ ಜಿ ಎಂ 2020 ದಿನಾಂಕ: 11.03.2020.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಆದೇಶ ಸಂಖ್ಯೆ DD/SSU/COVID-19/17/19-20 ದಿನಾಂಕ:13-03-2020
3. ಸರ್ಕಾರದ ಕಂದಾಯ ಇಲಾಖೆಯ ಆದೇಶ ಸಂಖ್ಯೆ: ಆರ್.ಡಿ.157 ಟಿ ಎನ್ ಆರ್ 2020, ದಿನಾಂಕ:14.03.2020
4. ಮಾನ್ಯ ಕಂದಾಯ ಸಚಿವರು ಕರ್ನಾಟಕ ಸರ್ಕಾರ ರವರ ಪತ್ರದ ಸಂಖ್ಯೆ: ಕಂ.ಸ 678 / 2020 ದಿನಾಂಕ: 18.03.2020
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಪರಿಷ್ಕೃತ ಆದೇಶ ಸಂಖ್ಯೆ DD/SSU/COVID-19/17/19-20 ದಿನಾಂಕ: 20-03-2020

DISTRICT MAGISTRATE MYSORE DISTRICT

*****

ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ COVID-19 ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಹಾಗೂ ವೈಯಕ್ತಿಕ ಮತ್ತು ಸಮುದಾಯದ ತುರ್ತು ಪರಿಸ್ಥಿತಿಯನ್ನು ಎದುರಿಸಲು ಈಗಾಗಲೇ ಕ್ರಮಗಳನ್ನು ತೆಗೆದುಕೊಳ್ಳಲಾಗಿರುತ್ತದೆ.

ರಾಜ್ಯದಲ್ಲಿ ಕೊರೊನಾ ರೋಗಾಣು ಹರಡುತ್ತಿರುವ ಬಗ್ಗೆ ಹಿನ್ನಲೆಯಲ್ಲಿ ಸರ್ಕಾರವು ಉಲ್ಲೇಖ (2) ರ ಆದೇಶದಲ್ಲಿ Disaster Management Act 2005 ರ ವಿಧಿ 22 ರ ಉಪಪ್ರಕರಣ 2 (H) ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸದರಿ ಕಾಯ್ದೆಯ ಕಲಂ 24 (a) (b) (f) (h) (j) (k) ಮತ್ತು (l) ರಡಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ

ಅಧ್ಯಕ್ಷರಿಗೆ (ಜಿಲ್ಲಾಧಿಕಾರಿಗಳು) COVID-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಆದೇಶಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ಮೈಸೂರು ಜಿಲ್ಲೆಯಲ್ಲಿ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಹಾಗೂ ಈ ಪ್ರಕ್ರಿಯೆಗಳಲ್ಲಿ ಸ್ವಯಂ ಸೇವಕರ ಸೇವೆಯನ್ನು ಬಳಸಿಕೊಳ್ಳುವ ಉದ್ದೇಶಕ್ಕಾಗಿ ಸ್ವಯಂ ಸೇವಕರ (Volunteers) ನೋಂದಣಿಗೆ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಭರ್ತಿ ಮಾಡಲು ಅವಕಾಶ ಕಲ್ಪಿಸಿ ಒಂದು ತಂತ್ರಾಂಶವನ್ನು ಎರಡು ದಿನಗಳೊಳಗಾಗಿ ಅಭಿವೃದ್ಧಿಪಡಿಸಿ ಮೈಸೂರು ಜಿಲ್ಲೆಯ ಜಿಲ್ಲಾ ವೆಬ್ ಸೈಟ್ ನಲ್ಲಿ ಅಳವಡಿಸಲು ನಿರ್ದೇಶಿಸಿದೆ. ಸದರಿ ತಂತ್ರಾಂಶದಲ್ಲಿ ಈ ಕೆಳಕಂಡ ಮಾಹಿತಿ ಅಗತ್ಯವಾಗಿರುತ್ತದೆ.

**Covid – 19 Volunteer Registration Portal**

1. ಹೆಸರು,
2. ವಿಳಾಸ,
3. ಮೊಬೈಲ್ / ದೂರವಾಣಿ ಸಂಖ್ಯೆ
4. ಇ-ಮೇಲ್ ವಿಳಾಸ
5. ಸ್ವಯಂ ಸೇವಕರು ಹೊಂದಿರುವ ನೈಪುಣ್ಯತೆ (Skills)
6. ಸ್ವಯಂ ಸೇವಕರು ಅವಶ್ಯಕವಿರುವಂತಹ ಉಪಕರಣ / ಇತರೇ ಸರಬರಾಜು / ಮಾನವ ಸೇವೆ / ಇತ್ಯಾದಿಗಳನ್ನು ತಾವೇ ಒದಗಿಸಲು ಶಕ್ತರಿರುತ್ತಾರೆಯೇ {ಹೌದು/ಇಲ್ಲ (Select Option)} ಹೌದು ಎಂದಾದಲ್ಲಿ ವಿವರ.
7. ಸ್ವಯಂ ಸೇವಕರು ಲಭ್ಯವಾಗುವ ದಿನಗಳು (ಸೋಮವಾರ / ಮಂಗಳವಾರ / ಬುಧವಾರ/ ಗುರುವಾರ / ಶುಕ್ರವಾರ / ಶನಿವಾರ / ಭಾನುವಾರ) – Tick Mark option against each day to be made available.
8. ಇತರೆ ಮಾಹಿತಿ.

DISTRICT MAGISTRATE
MYSORE DISTRICT

ತಮ್ಮ ನಂಬುಗೆಯ

(ಅಭಿರಾಮ್ ಜಿ.ಶಂಕರ್)
ಜಿಲ್ಲಾಧಿಕಾರಿ
ಹಾಗೂ ಜಿಲ್ಲಾ ದಂಡಾಧಿಕಾರಿ
ಮೈಸೂರು ಜಿಲ್ಲೆ, ಮೈಸೂರು

ಪ್ರತಿಯನ್ನು:-ಕೆಳಕಂಡವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು
2. ಪೊಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು.
3. ಪೊಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು.
5. ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ, ಮೈಸೂರು.
6. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು